ಕುರ್ಆನಿನ ವ್ಯಕ್ತಿಯೊಡನೆ ಹೇಳಲಾಗುವುದು: ಪಠಿಸು ಮತ್ತು ಏರುತ್ತಾ ಹೋಗು. ಇಹಲೋಕದಲ್ಲಿ ಸಾವಧಾನದಿಂದ ಪಠಿಸುತ್ತಿದ್ದಂತೆ ಪಠಿಸು. ನೀನು ಪಠಿಸುವ ಕೊನೆಯ ವಚನದ ಬಳಿ ನಿನ್ನ ಪದವಿಯಿದೆ

ಅಬ್ದುಲ್ಲಾ ಬಿನ್ ಅಮ್ರ್ (ಅಲ್ಲಾಹು ಅವರಿಬ್ಬರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ)
ಹೇಳಿದರು: "ಕುರ್ಆನಿನ ವ್ಯಕ್ತಿಯೊಡನೆ ಹೇಳಲಾಗುವುದು: ಪಠಿಸು ಮತ್ತು ಏರುತ್ತಾ ಹೋಗು. ಇಹಲೋಕದಲ್ಲಿ ಸಾವಧಾನದಿಂದ ಪಠಿಸುತ್ತಿದ್ದಂತೆ ಪಠಿಸು. ನೀನು ಪಠಿಸುವ ಕೊನೆಯ ವಚನದ ಬಳಿ
ನಿನ್ನ ಪದವಿಯಿದೆ."
[حسن] [رواه أبو داود والترمذي والنسائي في الكبرى وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಕುರ್ಆನ್ ಪಠಿಸುವವನು, ಅದರ ಪ್ರಕಾರ ಜೀವನ ನಡೆಸಿದವನು ಮತ್ತು ಸದಾ ಕುರ್ಆನ್ ಪಠಿಸುತ್ತಾ ಕಂಠಪಾಠ ಮಾಡುತ್ತಾ ಇದ್ದವನೊಂದಿಗೆ ಅವನು ಸ್ವರ್ಗವನ್ನು ಪ್ರವೇಶಿಸಿದಾಗ ಹೀಗೆ ಹೇಳಲಾಗುವುದು: "ನೀನು ಕುರ್ಆನ್ ಪಠಿಸು ಮತ್ತು ಅದರ ಮೂಲಕ ಸ್ವರ್ಗದ ಪದವಿಗಳಿಗೆ ಏರುತ್ತಾ ಹೋಗು. ಇಹಲೋಕದಲ್ಲಿ ಶಾಂತವಾಗಿ ಮತ್ತು ಸಾವಧಾನದಿಂದ ಪಠಿಸುತ್ತಿದ್ದಂತೆ ಪಠಿಸು. ನೀನು ಪಠಿಸುವ ಕೊನೆಯ ವಚನದ ಬಳಿ ನಿನ್ನ ಪದವಿಯಿದೆ."

https://sunnah.global/hadeeth/kn/show/65054